**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ಹುಣಸೂರು.**

## Crl Misc. ಸಂಖ್ಯೆ: 39/2026

**ಸಾಕ್ಷಿಯನ್ನು ದಿಃ 14.08.2026 ರಂದು ಕರೆಸಿ ಪ್ರಮಾಣವಚನ ಬೋದಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ. I.T ವಕೀಲರಿಂದಃ**

ನಾನು ಈ ಕೇಸಿನಲ್ಲಿ ಅರ್ಜಿದಾರನಾಗಿದ್ದು, ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು ಅದರಲ್ಲಿ ಹೇಳಿರುವ ಸಂಗತಿಗಳೆಲ್ಲ ಸತ್ಯವಾಗಿದ್ದು ಸಹಿ ಮಾಡಿದ್ದೇನೆ.

ಎದುರುದಾರರು ನೀಡಿದ ಅಲಭ್ಯ ಪ್ರಮಾಣ ಪತ್ರವನ್ನು ನಿಪಿ-1 ಎಂದು, ನಮ್ಮ ಕುಟುಂಬದ ವಂಶವೃಕ್ಷದ ಬಗ್ಗೆ ಪ್ರಮಾಣ ಪತ್ರವನ್ನು ನಿಪಿ-2 ಎಂದು, ನನ್ನ ಆಧಾರ್ ಕಾರ್ಡ್ ನ ನೋಟರಿ ಪ್ರತಿಯನ್ನು ಹಾಜರುಪಡಿಸಿದ್ದೇನೆ. (ಸಾಕ್ಷಿಯು ಈ ದಿನ ಮೂಲ ಆಧಾರ್ ಕಾರ್ಡನ್ನು ಹಾಜರುಪಡಿಸಿದ್ದು, ಅದನ್ನು ನೋಟರಿ ಪ್ರತಿಯೊಂದಿಗೆ ತಾಳೆ ಮಾಡಿ ನೋಡಿ ಸರಿ ಇದ್ದು, ಮೂಲ ಆಧಾರ್ ಕಾರ್ಡ್‌ನ್ನು ಸಾಕ್ಷಿಗೆ ಹಿಂದಿರುಗಿಸಲಾಯಿತು) ಆಧಾರ್ ಕಾರ್ಡ್‌ನ ನೋಟರಿ ಪ್ರತಿಯನ್ನು ನಿಪಿ-3 ಎಂದು ಗುರುತಿಸಲಾಯಿತು. ಈ ಅರ್ಜಿ ಸಲ್ಲಿಸಿದ ಬಗ್ಗೆ ಎರಡು ಪತ್ರಿಕಾ ಪ್ರಕಟಣೆ ಮಾಡಿದ ಬಾಬ್ತು ಎರಡು ದಿನ ಪತ್ರಿಕೆಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಪಿ-4 ಮತ್ತು 5 ಎಂದು, ಪ್ರಕಟಣೆಯ ಭಾಗಗಳನ್ನು ನಿಪಿ-4(ಎ) ಮತ್ತು ನಿಪಿ-5(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಎದುರುದಾರರು ಪರ ವಕೀಲರಿಂದಃ**

ಎದುರುದಾರರು ಏಕಪಕ್ಷಿಯರಾಗಿದ್ದು, ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು. .

**ಮರುವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು).

ಓ.ಹೇ.ಕೇ.ಸ.ಇದೆ.

(ಅನಿತ)
ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು
ಜೆ.ಎಂ.ಎಫ್.ಸಿ., ಹುಣಸೂರು.